**ಓ.ಎಸ್.ನಂ. 328/2021**

**ಪಿ.ಡಬ್ಲ್ಯೂ:1**

ದಿನಾಂಕಃ14-07-2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಡಿ ಎನ್ ಪಿ  ಪ್ರತಿವಾದಿ ಪರ ವಕೀಲರಿಂದಃ-**

ನಾನು ವಿಷ್ಣು ಪ್ರಸಾದ್ ಹೆಚ್.ಪಿ. ಗ್ಯಾಸ್ ಅಂಗಡಿಯಲ್ಲಿ ಮ್ಯಾನೇಜರ್ ಆಗಿ ಕಳೆದ 28 ವರ್ಷದಿಂದ ಕೆಲಸ ಮಾಡುತ್ತಿದ್ದೇನೆ. ಸದರಿ ಅಂಗಡಿ ಪಕ್ಕ ಸಿಂಡಿಕೇಟ್ ಬ್ಯಾಂಕ್ ಇದೆ ಎಂದರೆ ಸರಿ. ಸಿಂಡಿಕೇಟ್ ಬ್ಯಾಂಕ್ ಮತ್ತು ನಮ್ಮ ಅಂಗಡಿ ಒಂದೇ ಬಿಲ್ಡಿಂಗ್ ನಲ್ಲಿ ಇದೆ ಎಂದರೆ ಸರಿ. 1 ನೇ ಪ್ರತಿವಾದಿಯು ತನ್ನ ಬಾರ್ ನ ಸಂಬಂಧವಾಗಿ ಸಿಂಡಿಕೇಟ್ ಬ್ಯಾಂಕಿಗೆ ಹಣ ಪಾವತಿ ಮಾಡಲು ಪ್ರತಿ ದಿನ ಬರುತ್ತಿದ್ದ ಬಗ್ಗೆ ನನಗೆ ತಿಳಿದಿರುವುದಿಲ್ಲ. ನನಗೆ ಆ ಕಾರಣದಿಂದ 1 ನೇ ಪ್ರತಿವಾದಿಯ ಪರಿಚಯ ಆಯಿತು ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಮೊದಲಿನಿಂದಲೂ ಪರಿಚಯ ಎಂದು ನುಡಿಯುತ್ತಾರೆ. ಬ್ಯಾಂಕಿಗೆ ಬರುತಿದ್ದ ಕಾರಣ 1 ನೇ ಪ್ರತಿವಾದಿಯು ನನಗೆ ಪಾಸ್ ಬುಕ್ ಎಂಟ್ರಿ ಮಾಡಿಸಲು ಮತ್ತು ಇತರ ಕೆಲಸ ಹೇಳುತಿದ್ದರು ಎಂದರೆ ಸರಿಯಲ್ಲ. ಸದರಿ ವಿಶ್ವಾಸವನ್ನು ದುರುಪಯೋಗಪಡಿಸಿಕೊಂಡು ಸುಳ್ಳು ಪ್ರಕರಣ ದಾಖಲಿಸಿದ್ದೇನೆಂದರೆ ಸರಿಯಲ್ಲ.

1 ನೇ ಪ್ರತಿವಾದಿಯು ನನಗೆ  ಬಾರನ್ನು ಲೀಸ್ ಗೆ ನೀಡಿಲ್ಲ ಎಂದರೆ ಸರಿಯಲ್ಲ. ನನಗೆ ದಿಃ 26-12-2018 ರ ಕರಾರು ಬರೆದುಕೊಟ್ಟಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಬಾಡಿಗೆಯನ್ನು ನೀಡುತ್ತಿರಲಿಲ್ಲ ಮತ್ತು ಮುಂಗಡ ಹಣ ನೀಡಿಲ್ಲ ಎಂದರೆ ಸರಿಯಲ್ಲ. ನಾನು ಕಟ್ಟಡಕ್ಕೆ ಯಾವುದೇ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಪ್ರತಿವಾದಿಳೊಂದಿಗೆ ಯಾವುದೇ ವ್ಯವಹಾರ ಮಾಡಿಲ್ಲ ಎಂದರೆ ಸರಿಯಲ್ಲ. ಸುಳ್ಳು ಸಾಕ್ಷ್ಯನುಡಿಯುತಿದ್ದೇನೆಂದರೆ ಸರಿಯಲ್ಲ. ಪ್ರತಿವಾದಿಗಳ ಪರಿಚಯವನ್ನು ದುರಪಯೋಗಪಡಿಸಿಕೊಂಡು ಅವರ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿದ್ದೇನೆಂದರೆ ಸರಿಯಲ್ಲ. ಪ್ರತಿವಾದಿಗೆ ತೊಂದರೆ ನೀಡಲು ಸುಳ್ಳು ದಾವೆ ಹೂಡಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ**.

**(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

ಓ.ಹೇ.ಕೇ.ಸ.ಇ.ಎ.ಓ.

ಸಹಿ/-

**2 ನೇ.ಹೆ.ಪ್ರಃದಃನ್ಯಾಃದಂ.,ರವರು,**
**ಕಡೂರು.**